# ಪ್ರಧಾನ ಸಿವಿಲ್ ನ್ಯಾಯಾಧೀಶರು ಮತ್ತು ಪ್ರಥಮ ದರ್ಜೆ ನ್ಯಾಯಿಕ ದಂಡಾಧಿಕಾರಿಯವರ ನ್ಯಾಯಾಲಯ, ತಿ.ನರಸೀಪುರ

**ಸಿ.ಸಿ.1799/2022**

| | | | | |
|---|---|---|---|---|
| 01 | ಹೆಸರು | ಬಿ ಎಲ್ ಶರತ್ಚಂದ್ರ | ಸಿ ಡಬ್ಲೂ | 1 |
| 02 | ಗಂಡನ ಹೆಸರು | ಬಿ ಲಿಂಗಪ್ಪ | ಪಿಡಬ್ಲೂ | 1 |
| 03 | ವಯಸ್ಸು | 44 | ಪ್ರಮಾಣೀಕರಿಸಲಾದ ದಿನಾಂಕಃ | |
| 04 | ಉದ್ಯೋಗ | ವ್ಯವಸಾಯ | 23.02.2026 | |
| 05 | ಊರು | ಬಸವನಹಳ್ಳಿ ಗ್ರಾಮ | | |

**ಮುಖ್ಯ ವಿಚಾರಣೆಃ ಮಾನ್ಯ ಸಹಾಯಕ ಸರ್ಕಾರಿ ಅಭಿಯೋಜಕರಿಂದ:**

ನನಗೆ ಚಾ ಸಾ 2 ಮತ್ತು 3 ಪರಿಚಯ ಇರುವುದಿಲ್ಲ. ನಾನು ಬನ್ನೂರು ಪೊಲೀಸರಿಗೆ ಯಾವುದೇ ದೂರು ನೀಡಿರುವುದಿಲ್ಲ. ಈಗ ನೋಡುತ್ತಿರುವ ದಾಖಲೆಯಲ್ಲಿ ಇರುವ ಸಹಿ ನನ್ನದೆ. ಸದರಿ ದಾಖಲೆಯು ದೂರಾಗಿದ್ದು, ಅದನ್ನು ನಿ ಪಿ 1 ಎಂದು ಹಾಗೂ ಸಾಕ್ಷಿಯ ಸಹಿಯನ್ನು ನಿ ಪಿ 1(ಎ) ಎಂದು ಗುರುತಿಸಲಾಯಿತು. ನನಗೆ ನಿ ಪಿ 1ರಲ್ಲಿ ಬರೆದಿರುವ ಸಂಗತಿಗಳು ಗೊತ್ತಿಲ್ಲ. ಆರೋಪಿಗಳು ಏನು ತಪ್ಪು ಮಾಡಿರುತ್ತಾರೆ ಎಂದು ನನಗೆ ಗೊತ್ತಿಲ್ಲ.

ಈಗ ನೋಡುತ್ತಿರುವ ಮತ್ತೊಂದು ದಾಖಲೆಯಲ್ಲಿರುವ ಸಹಿ ನನ್ನದೆ. ಸದರಿ ದಾಖಲೆಯು ಸ್ಥಳ ಮಹಜರ್ ಆಗಿದ್ದು ಅದನ್ನು ನಿ ಪಿ 2 ಎಂದು ಹಾಗೂ ಸಾಕ್ಷಿ ಸಹಿಯನ್ನು ನಿ ಪಿ 2(ಎ) ಎಂದು ಗುರುತಿಸಲಾಯಿತು. ನನಗೆ ನಿ ಪಿ 2 ರಲ್ಲಿ ಬರೆದಿರುವ ವಿಚಾರ ಗೊತ್ತಿಲ್ಲ. ನನ್ನ ಸಮಕ್ಷಮ ಪೊಲೀಸರು ನಿ ಪಿ 2 ರಂತೆ ಯಾವುದೆ ಮಹಜರ್ ಕ್ರಮ ಜರುಗಿಸಿರುವುದಿಲ್ಲ.

ಅದೇ ರೀತಿ ಈಗ ನೋಡುತ್ತಿರುವ ಮತ್ತೊಂದು ದಾಖಲೆಯಲ್ಲಿರುವ ಸಹಿ ನನ್ನದೆ. ಸದರಿ ದಾಖಲೆಯು ಕೋಳಿ ಫೀಡ್ಸ್‌ನ ಬಿಡುಗಡೆಯ ಮಹಜರ್ ಆಗಿದ್ದು ಅದನ್ನು ನಿ ಪಿ 3 ಎಂದು ಹಾಗೂ ಸಾಕ್ಷಿ ಸಹಿಯನ್ನು ನಿ ಪಿ 3(ಎ) ಎಂದು ಗುರುತಿಸಲಾಯಿತು. ನನಗೆ ನಿ ಪಿ 3 ರಲ್ಲಿ ಬರೆದಿರುವ ವಿಚಾರ ಗೊತ್ತಿಲ್ಲ. ನನ್ನ ಸಮಕ್ಷಮ ಪೊಲೀಸರು ನಿ ಪಿ 3 ರಂತೆ ಯಾವುದೆ ಮಹಜರ್ ಕ್ರಮ ಜರುಗಿಸಿರುವುದಿಲ್ಲ. ನಾನು ನಿ ಪಿ 1 ರಿಂದ 3ಕ್ಕೆ ಪೊಲೀಸ್ ಠಾಣೆಯಲ್ಲಿ ಸಹಿ ಮಾಡಿರುತ್ತೇನೆ. ನನಗೆ ಈ ಪ್ರಕರಣದ ಬಗ್ಗೆ ಯಾವುದೇ ಮಾಹಿತಿ ಇರುವುದಿಲ್ಲ. ಛಾಯಾಚಿತ್ರಗಳನ್ನು ನೋಡಿ ಸಾಕ್ಷಿ ಗುರುತಿಸಿರುವುದಿಲ್ಲ. ಆರೋಪಿಗಳನ್ನು ನಾನು ಈ ಹಿಂದೆ ನೋಡಿರುವುದಿಲ್ಲ.

**(ಸಾಕ್ಷಿಯನ್ನು ಪ್ರತಿಕೂಲ ಸಾಕ್ಷಿಯೆಂದು ಪರಿಗಣಿಸಿ ಮಾನ್ಯ ಎ ಪಿ ಪಿ ರವರು ಪಾಟೀ ಸವಾಲಿಗೆ ಅನುಮತಿ ಕೋರಿದ್ದು ಅನುಮತಿ ನೀಡಲಾಯಿತು.)**

**ಪಾಟೀ ಸವಾಲುಃ ಮಾನ್ಯ ಸಹಾಯಕ ಸರ್ಕಾರಿ ಅಭಿಯೋಜಕರಿಂದ:**

ದಿಃ09.01.2022 ರಂದು ಮಧ್ಯರಾತ್ರಿ 1.30 ಗಂಟೆ ಸಮಯದಲ್ಲಿ ರಂಗನಾಥ ಪುರ ಗ್ರಾಮದಲ್ಲಿ ರುವ ನನ್ನ ಕೋಳಿ ಫಾರಂ ನ ರೂಂ ಬಾಗಿಲಿಗೆ ಹಾಕಿದ್ದ ಬೀಗವನ್ನು ಆರೋಪಿಗಳು ಒಡೆದು ಒಳಗೆ ಪ್ರವೇಶಿಸಿ 19 ಕೋಳಿ ಫೀಡ್ಸ್ ಮೂಟೆಗಳನ್ನು ಕಳ್ಳತನ ಮಾಡಿ 3 ನೇ ಆರೋಪಿಯ ಕೆ ಎ 55 2548 ಗೂಡ್ಸ್ ಆಟೋದಲ್ಲಿ ಮೈಸೂರಿಗೆ ತೆಗೆದುಕೊಂಡು ಹೋಗಿ ಆ ಪೈಕಿ 2 ಮೂಟೆಯನ್ನು ರೂ.5000/- ಕ್ಕೆ ಮಾರಾಟ ಮಾಡಿ ಉಳಿದ 17 ಮೂಟೆಗಳನ್ನು ಗೂಡ್ಸ್ ವಾಹನದಲ್ಲೇ ಇಟ್ಟಿರುತ್ತಾರೆ ಎಂದರೆ ಸರಿಯಲ್ಲ. ನಿ ಪಿ 1 ರಂತೆ ನಾನು ಪೊಲೀಸರಿಗೆ ದೂರು ಕೊಟ್ಟಿರುತ್ತೇನೆ ಎಂದರೆ ಸರಿಯಲ್ಲ. ನಂತರ ಪೊಲೀಸರು ಸ್ಥಳಕ್ಕೆ ಬಂದು ನಾನು ತೋರಿಸಿದ ಸ್ಥಳದಲ್ಲಿ ಚಾ ಸಾ 2 ಮತ್ತು 3 ರವರ ಸಮಕ್ಷಮ ಬೆಳಗ್ಗೆ 9.00-10.00 ಗಂಟೆಯವರೆಗೂ ನಿ ಪಿ 2 ರಂತೆ ಸ್ಥಳ ಮಹಜರು ಜರುಗಿಸಿರುತ್ತಾರೆ ಎಂದರೆ ಸರಿಯಲ್ಲ. ನಂತರ ಪೊಲೀಸರು ಆರೋಪಿಗಳನ್ನು ಮತ್ತು ಕಳುವಾದ ಮಾಲನ್ನು ಪತ್ತೆ ಹಚ್ಚಿ ಆರೋಪಿಗಳು ಕಳುವು ಮಾಡಿದ ಕೋಳಿ ಫೀಡ್ಸ್ ಅನ್ನು ನಿ ಪಿ 3 ರಂತೆ ಚಾ ಸಾ 9 ಮತ್ತು 10 ರವರ ಸಮಕ್ಷಮ ಮಹಜರು ಜರುಗಿಸಿ ನನಗೆ ಬಿಡುಗಡೆ ಮಾಡಿರುತ್ತಾರೆ ಎಂದರೆ ಸರಿಯಲ್ಲ.

ನಾನು ನಿ ಪಿ 1 ರಂತೆ ಆರೋಪಿಗಳ ವಿರುದ್ಧ ಪೊಲೀಸರಿಗೆ ದೂರು ಕೊಟ್ಟಿದ್ದರೂ ಸಹ ಮತ್ತು ಪೊಲೀಸರು ನನ್ನ ಸಮಕ್ಷಮ ನಿ ಪಿ 2 ಮತ್ತು 3 ರಂತೆ ಪಂಚನಾಮೆ ಜರುಗಿಸಿದ್ದರೂ ಸಹ, ನಾನು ಮತ್ತು ಆರೋಪಿಗಳು ಈಗ ರಾಜಿ ಮಾಡಿಕೊಂಡ ಕಾರಣ ಆರೋಪಿಗಳಿಗೆ ಸಹಾಯ ಮಾಡುವ ಉದ್ದೇಶದಿಂದ ಸುಳ್ಳು ಸಾಕ್ಷಿ ನುಡಿಯುತ್ತಿದ್ದೇನೆ ಎಂದರೆ ಸರಿಯಲ್ಲ.

**ಪಾಟೀ ಸವಾಲುಃ ಆರೋಪಿ ಪರ ವಕೀಲರಿಂದಃ ಇರುವುದಿಲ್ಲ ಎಂದು ನುಡಿದಿರುತ್ತಾರೆ.**

ಮರುವಿಚಾರಣೆಃಇಲ್ಲ.

(ತೆರೆದ ನ್ಯಾಯಾಲಯದಲ್ಲಿ ನನ್ನ ಉಕ್ತ ಲೇಖನದಂತೆ ಬೆರಳಚ್ಚು ಮಾಡಲಾಯಿತು.)

ಓ ಹೇ ಕೇ ಸರಿಯಾಗಿದೆ.

(ಸಚಿನ್ ಹೆಚ್ . ಆರ್.)
ಪ್ರಧಾನ ಸಿವಿಲ್ ನ್ಯಾಯಾಧೀಶರು
ಮತ್ತು ಜೆ.ಎಂ.ಎಫ್.ಸಿ., ತಿ.ನರಸೀಪುರ.